ಖಾತೆಗಾಗಿ ಪಟ್ಟು ಹಿಡಿಯುವುದು ತಪ್ಪು : ಶಾಸಕ ಕೊತ್ತೂರು ಮಂಜುನಾಥ್

ಉದಯಕಾಲ ನ್ಯೂಸ್, ಕೋಲಾರ: ಮಂತ್ರಿಯಾದವರು ಕೆಲಸ ಮಾಡಬೇಕೇ ಹೊರತು, ನನಗೆ ಅದೇ ಖಾತೆ ಬೇಕು ಇದೇ ಖಾತೆ ಬೇಕು ಎಂದು ಪಟ್ಟು ಹಿಡಿಯುವುದು ತಪ್ಪು. ಕೆಲಸ ಮಾಡಲು ಯಾವುದೇ ಖಾತೆಯಾದರೂ ಒಂದೇ ಎಂದು ಶಾಸಕ ಕೊತ್ತೂರು ಮಂಜುನಾಥ್ ಅಭಿಪ್ರಾಯಪಟ್ಟರು.

ನಗರದ ಜಿಪಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಿರುವ ದಿಶಾ ಸಭೆಯಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಸಾಮಾನ್ಯವಾಗಿ ಸಣ್ಣಪುಟ್ಟ ವಿಚಾರಗಳು ಇರುತ್ತವೆ ಶೀಘ್ರದಲ್ಲೇ ಎಲ್ಲವೂ ಸರಿಯಾಗಲಿದೆ. ಇಷ್ಟು ದಿನ ಇದ್ದ ಎಲ್ಲಾ ಮಂತ್ರಿಗಳ ಪೈಕಿ ರಾಮಲಿಂಗಾರೆಡ್ಡಿ ಅವರು ಅತ್ಯತ್ತಮ ಸಚಿವರು. ಅವರಿಗೆ ಗನ್ ಮ್ಯಾನ್ ಆಗಲಿ, ಪಿಎ ಆಗಲಿ ಇಲ್ಲ. ಯಾರು ಫೋನ್ ಮಾಡಿದರೂ ಶೇ.100ರಷ್ಟು ಅವರೇ ಕರೆಯನ್ನು ಸ್ವೀಕರಿಸುತ್ತಾರೆ. ಒಂದು ವೇಳೆ ಬ್ಯುಸಿ ಇದ್ದರೂ ಮಿಸ್ಡಾ ಅವರೇ ಕಾಲ್ ಬ್ಯಾಕ್ ಮಾಡುತ್ತಾರೆ. ಅವರು ಅತ್ಯಂತ ಬುದ್ಧಿವಂತ ಸಚಿವರಾಗಿದ್ದು, ಕಳೆದ ರಾತ್ರಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಮನವೊಲಿಸಿದ್ದಾರೆ ಎಂದರು.

ಮೂವರು ಸಚಿವರಿಗೆ ಅಸಮಾಧಾನ ಇರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಅದು ನನಗೆ ಗೊತ್ತಿಲ್ಲ. ಆದರೆ, ಈಗ ಸೀನಿಯರಿಟಿ ಮೇಲೆ ಮಂತ್ರಿ ಸ್ಥಾನ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು.

ಕೋಲಾರ ಜಿಲ್ಲೆಗೆ ಈ ಬಾರಿ ಸಚಿವ ಸ್ಥಾನ ನೀಡಬೇಕು ಎಂದು ಜಿಲ್ಲೆಯ ನಾಲ್ಕೂ ಜನ ಶಾಸಕರು ಒಗ್ಗಟ್ಟಾಗಿ ಹೈಕಮಾಂಡ್‌ಗೆ ಪತ್ರ ಬರೆದು ಗಮನ ಸೆಳೆದಿದ್ದೇವೆ. ಈ ಬಾರಿ ಜಿಲ್ಲೆಗೆ ಸಚಿವ ಸ್ಥಾನ ಸಿಗುವ ಸಂಪೂರ್ಣ ಭರವಸೆ ಇದೆ. ನಮ್ಮ ನಾಲ್ಕು ಜನ ಶಾಸಕರಲ್ಲಿ ಯಾರಿಗೆ ಕೊಟ್ಟರೂ ನಮಗೆ ಯಾವುದೇ ತಕರಾರಿಲ್ಲ. ಎಲ್ಲರೂಗೂ ಸಮ್ಮತಿ ಇದೆ. ಸೀನಿಯಾರಿಟಿ ಮೇಲೆ ಎಸ್.ಎನ್. ನಾರಾಯಣಸ್ವಾಮಿ, ಜನರಲ್ ಕೋಟಾದಲ್ಲಿ ನಂಜೇಗೌಡ ಹಾಗೂ ಅಲೆಮಾರಿ ಕೋಟಾದಲ್ಲಿ ನಾನಿದ್ದೇನೆ ಎಂದರು.

ಕಳೆದ ಬಾರಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಸಚಿವ ಸ್ಥಾನ ನೀಡಲಾಗಿತ್ತು. ಈ ಬಾರಿಯೂ ಅವರಿಗೆ ಕೊಡಬೇಡಿ ಎಂದು ನಾವು ಹೇಳುತ್ತಿಲ್ಲ. ಆದರೆ ಕೋಲಾರಕ್ಕೂ ಸಚಿವ ಸ್ಥಾನ ನೀಡಿ ಎನ್ನುವುದು ನಮ್ಮ ಬೇಡಿಕೆ ಎಂದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ಮುಂದಿನ ದಿನಗಳಲ್ಲಿ ಯಾರು ಆರ್ ಟಿಟ್ ಆಗ್ತಾರೆ ಎಂಬುದು ಗೊತ್ತಾಗಲಿದೆ. ಬಿಜೆಪಿ ಇದುವರೆಗೆ ಸ್ವಂತ ಬಲದ ಮೇಲೆ ಮೆಜಾರಿಟಿ ಪಡೆದು ಸರ್ಕಾರ ಮಾಡಿದ ಇತಿಹಾಸವಿಲ್ಲ. ಮುಂದೆಯೂ ಅದು ಸಾಧ್ಯವಿಲ್ಲ. ಮುಂದಿನ ದಿನಗಳಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಅವರು ಹಾಗೆ ಮಾಡುತ್ತಾರೆ, ಹೀಗೆ ಮಾಡುತ್ತಾರೆ ಎಂದು ನೂರು ಜನ ನೂರು ಮಾತನಾಡಿಕೊಳ್ಳುತ್ತಿದ್ದಾರೆ, ಅದೆಲ್ಲವೂ ಸುಳ್ಳು. ಸತ್ಯ! ಸಿದ್ದರಾಮಯ್ಯ ಅವರೇ ಡಿ.ಕೆ. ಶಿವಕುಮಾರ್ ಅವರ ಹೆಸರು ಹೇಳಿ ಸಿಎಂ ಮಾಡಿದ್ದಾರೆ. ಇದರಲ್ಲಿ ಯಾವುದೇ ಒತ್ತಡವಾಗಲಿ ಅಥವಾ ತಕರಾರಾಗಲಿ ಇಲ್ಲ ಎಂದು ಸ್ಪಷ್ಟಪಡಿಸಿದರು.

ಅಪರಾಧ ಪ್ರಕರಣ ಹೆಚ್ಚಳ: ಶಾಸಕ ಸಮೃದ್ಧಿ ಮಂಜುನಾಥ್ ಎಸ್ಪಿಗೆ ತರಾಟೆ

ಉದಯಕಾಲ ನ್ಯೂಸ್, ಕೋಲಾರ: ಜಿಲ್ಲೆಯಲ್ಲಿ ಅದರಲ್ಲೂ ಮುಳಬಾಗಿಲು ತಾಲೂಕಿನಲ್ಲಿ ಕ್ರಿಕೆಟ್ ಬೆಟ್ಟಿಂಗ್, ಪೋಕ್ಸೊ ಪ್ರಕರಣ, ವಾಹನ ಕಳ್ಳತನ ಸೇರಿದಂತೆ ಅಪರಾಧ ಪ್ರಕರಣ ಹೆಚ್ಚಿತ್ತಿರುವ ಸಂಬಂಧ ಶಾಸಕ ಸಮೃದ್ಧಿ ಮಂಜುನಾಥ್ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್ ಅವರನ್ನು ತರಾಟೆಗೆ ತೆಗೆದುಕೊಂಡರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ನಡೆದ ದಿಶಾ ಸಭೆಯಲ್ಲಿ ಮಾತನಾಡಿ, ನೆರೆ ರಾಜ್ಯಗಳಿಂದ ಬಂದು ದ್ವಿಚಕ್ರ, ವಾಹನ ಕಳ್ಳತನ ಮಾಡುತ್ತಿದ್ದಾರೆ. ಡ್ರಗ್ಸ್ ಪ್ರಕರಣಗಳು, ರೌಡಿಸಂ ಹೆಚ್ಚುತ್ತಿವೆ. ಆದರೆ, ಪೊಲೀಸ್ ಇಲಾಖೆ ಮೌನವಾಗಿದೆ ಎಂದು ಹರಿಹಾಯ್ದರು.

ಶಾಸಕನಾದ ನನ್ನನ್ನು ತಾವು ಭೇಟಿಯಾಗಿ ಚರ್ಚೆ ಮಾಡಿದ್ದೀರಾ?. ತಾಲೂಕಿನಲ್ಲಿ ಶಾಂತಿ ಸಭೆ ನಡೆಸಿದ್ದೀರಾ? ಜಿಲ್ಲೆಯಲ್ಲಿ ಬರೋಬ್ಬರಿ 7 ಮಂದಿ ಬೆಟ್ಟಿಂಗ್ ಕಿಂಗ್‌ಪಿನ್ ಗಳಿದ್ದಾರೆ. ಇವರ ವಿರುದ್ಧ ಇಲಾಖೆ ಕೈಗೊಂಡಿರುವ ಕ್ರಮಗಳೇನು? ಪೋಕ್ಸೊ ಸಂಬಂಧ ಜನರಲ್ಲಿ ಅರಿವು ಮೂಡಿಸಿದ್ದೀರಾ ಎಂದು ಪ್ರಶ್ನಿಸಿದರು.

ಪೊಲೀಸ್ ಇಲಾಖೆಯ ಸುಧಾರಣೆಗಾಗಿ ಶಾಸಕರ ಸ್ವಂತ ಪ್ರದೇಶಾಭಿವೃದ್ಧಿ ಅನುದಾನದ ಅಡಿಯಲ್ಲಿ ಟ್ರಾಫಿಕ್ ಸಿಗ್ನಲ್ ದೀಪ ವ್ಯವಸ್ಥೆ ಮಾಡಲಾಗಿದೆ. ಇಲಾಖೆಯ ಬಳಕೆಗೆ ಕಾರುಗಳನ್ನು ಕೊಡಿಸಲಾಗಿದೆ. ಇಷ್ಟೆಲ್ಲಾ ಸೌಲಭ್ಯ ನೀಡಿದರೂ ಜಿಲ್ಲೆಯಲ್ಲಿ ಅಪರಾಧಗಳು ನಿಯಂತ್ರಣಕ್ಕೆ ಬರುತ್ತಿಲ್ಲವಲಿಕೆ? ಎಂದು ತರಾಟೆಗೆ ತೆಗೆದುಕೊಂಡರು.

ಇದಕ್ಕೆ ಪ್ರತಿಕ್ರಿಯಿಸಿದ ಎಸ್ಪಿ ಕನ್ನಿಕಾ ಸಿಕ್ರಿವಾಲ್, ಅಪರಾಧ ನಿಯಂತ್ರಣಕ್ಕೆ ಕ್ರಮ ವಹಿಸಲಾಗುತ್ತಿದೆ. ಪೋಕ್ಸೊ ಸಂಬಂಧ ಜಾಗೃತಿ ಮೂಡಿಸಲಾಗುತ್ತಿದೆ. ಮತ್ತಷ್ಟು ಗಮನ ಹರಿಸಲಾಗುವುದು ಎಂದು ಭರವಸೆ ನೀಡಿದರು.

ಒಬ್ಬ ರೈತನಿಗೆ ಒಂದು ಚೀಲ ಮಾತ್ರ ಯೂರಿಯಾ!

ಉದಯಕಾಲ ನ್ಯೂಸ್, ತುಮಕೂರು: ಮಧ್ಯ ಪ್ರಾಚ್ಯದಿಂದ ರಸಗೊಬ್ಬರಗಳ ಕೊರತೆಯಾಗಿದ್ದು, ಪ್ರತಿ ಮಾರಾಟಗಾರರು ರಾಜ್ಯ ಸರ್ಕಾರದ ಸುತ್ತೋಲೆಯಂತೆ ಕಡ್ಡಾಯವಾಗಿ ಯೂರಿಯಾವನ್ನು ಒಂದು ಚೀಲ ಒಬ್ಬ ರೈತನಿಗೆ ಒಂದು ಎಕರೆ ಪ್ರದೇಶಕ್ಕೆ ಸೀಮಿತಗೊಳಿಸಿ ಕೆ-ಕಿಸಾನ್ ತಂತ್ರಾಂಶದ ಮೂಲಕ ವಿತರಣೆ ಮಾಡಲು ತುಮಕೂರು ತಹಶೀಲ್ದಾರ್ ರಾಜೇಶ್ವರಿ ಸೂಚಿಸಿದ್ದಾರೆ.

ಇತ್ತೀಚೆಗೆ ತಮ್ಮ ಕಚೇರಿಯಲ್ಲಿ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ಎಲ್ಲ ತಹಶೀಲ್ದಾರರು ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಕಡ್ಡಾಯವಾಗಿ ಆನಿರೀಕ್ಷಿತ ಭೇಟಿ ನೀಡಿ ಎಫ್‌ಸಿಸಿ ಮತ್ತು ಇಸಿಎ ಪ್ರಕಾರ ಕಾರ್ಯ ನಿರ್ವಹಿಸತೆ ಇರುವ ಮಾರಾಟಗಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ತಿಳಿಸಿರುವುದರಿಂದ ಎಲ್ಲಾ ಮಾರಾಟಗಾರರು ಕಡ್ಡಾಯವಾಗಿ ರಸಗೊಬ್ಬರ ದಾಸ್ತಾನು ದರಪಟ್ಟಿ ಹಾಗೂ ರಕ್ಷಿಂ ಪುಸ್ತಕ, ದಾಸ್ತಾನು ನಿರ್ವಹಣೆ ಮಾಡಬೇಕೆಂದು ಸೂಚಿಸಿದ್ದಾರೆ.

ಮೈಲಾಂಡಹಳ್ಳಿ ನಾರಾಯಣಸ್ವಾಮಿ ಜೆಡಿಎಸ್‌ಗೆ

ಉದಯಕಾಲ ನ್ಯೂಸ್, ಮಾಲೂರು: ಕಾಂಗ್ರೆಸ್ ಪಕ್ಷದವರು ಎಸ್ಸಿ,ಎಸ್ಟಿಸಮುದಾಯದವರಿಗೆಯಾವುದೇಉನ್ನತಹುದ್ದೆಗಳನ್ನು ನೀಡದೆ ಕೇವಲ ಮತಕ್ಕಾಗಿ ಉಪಯೋಗಿಸಿಕೊಂಡಿದ್ದಾರೆ ಎಂದು ಮೈಲಾಂಡಹಳ್ಳಿ ನಾರಾಯಣಸ್ವಾಮಿ ಆರೋಪಿಸಿದರು.

ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರ ಮೈಲಾಂಡಹಳ್ಳಿ ನಾರಾಯಣಸ್ವಾಮಿ ಅವರು ಶನಿವಾರ ಹೂಡಿ ವಿಜಯಕುಮಾರ್ ಅವರ ನೇತೃತ್ವದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಅರಳೇರಿ ರಸ್ತೆಯಲ್ಲಿರುವ ಮೋದಿ ನಿವಾಸದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಮೈಲಾಂಡಹಳ್ಳಿ ನಾರಾಯಣಸ್ವಾಮಿ ಮಾತನಾಡಿ, ಕಾಂಗ್ರೆಸ್ ಪಕ್ಷದಲ್ಲಿ ಲಂಚ ಭ್ರಷ್ಟಾಚಾರ ತುಂಬಿ ತುಳುಕುತ್ತಿದ್ದು, ಆದರಿಂದ ಬೇಸತ್ತು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದೇನೆ. ಅಲ್ಲಿ ನಿಷ್ಠಾವಂತ ಕಾರ್ಯಕರ್ತರಿಗೆ ಬೆಲೆ ಇಲ್ಲ. ಸಂವಿಧಾನದ ಅಡಿಯಲ್ಲಿ ಸಾಮಾಜಿಕ ನ್ಯಾಯ ಕೊಡುತ್ತೇವೆ ಎಂದು ಹೇಳಿದವರು ದಲಿತರಿಗೆ, ಹಿಂದುಳಿದವರಿಗೆ ಬೆಳೆಯಲು ಬಾಗಿಗೆ ಅಡ್ಡಲಾಗಿ ಕಾಲು ಎಳೆಯುತ್ತಾರೆ ಎಂದರು.

ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ದಲಿತರನ್ನು ಎಡ ಬಲ ಎಂದು ವಿಭಾಗ ಮಾಡಿ ಹೊಡೆದಾಡುವ ನೀತಿಯನ್ನು ಅನುಸರಿಸಿ ಕೇವಲ ಬರಿ ಮತಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆ. ನಾನು ಮೊದಲು ಜೆಡಿಎಸ್ ಪಕ್ಷದಲ್ಲಿ ಇದ್ದು ಅಧಿಕಾರ ಪಡೆದು ಕಾರಣಾಂತರಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಹೋದೆ. ನನ್ನ ತವರು ಪಕ್ಷಕ್ಕೆ ಮರಳಿ ಬಂದಿದ್ದು ಹೂಡಿ ವಿಜಿಕುಮಾರ್ ಅವರಕ್ಕೆ ಬಲಪಡಿಸಿ ಮುಂದಿನ ದಿನಗಳಲ್ಲಿ ಪಕ್ಷದ ಸಂಘಟನೆಯಲ್ಲಿ ತೊಡಗಿ ಹೂಡಿ ವಿಜಿಕುಮಾರ್ ಅವರನ್ನು ಮಾಲೂರು ಶಾಸಕರನ್ನಾಗಿ ಮಾಡುತ್ತೇವೆ ಎಂದು ಹೇಳಿದರು.

ಜೆಡಿಎಸ್ ಮುಖಂಡರಾದ ಅಂಬರೀಶ್ ರೆಡ್ಡಿ, ರಾಜಾಗಾಮ್, ಮೋಹನ್ ಬಾಬು, ಮಾಜಿ ಪುರಸಭಾ ಅಧ್ಯಕ್ಷ ರಾಮಮೂರ್ತಿ, ಬಡಗಿ ಶ್ರೀನಿವಾಸ್, ಕಲಾಬ್ ರಾಮಮೂರ್ತಿ, ಹುಂಗೇನಹಳ್ಳಿ ಶ್ರೀನಾಥ್, ಎಎಲೇಕೆ ಕುಟ್ಟಿ, ಪೈಲ್ವಾನ್ ಮಂಜುನಾಥ್, ಕೊರಚಿಕೊರೂರು ನಾಗರಾಜ್, ಎಂಪಿಎಲ್ ವೆಂಕಟೇಶ್, ಮಿಲಿಟರಿ ರಾಮಪ್ಪ, ಜೆಡಿಎಸ್, ಕಾರ್ಯಕರ್ತರು, ಪದಾಧಿಕಾರಿಗಳು ಹಾಜರಿದ್ದರು.

ಜೂನ್ 28ರಂದು ವಿದ್ಯಾರ್ಥಿವೇತನ-ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

ಉದಯಕಾಲ ನ್ಯೂಸ್

ಚಿಕ್ಕಬಳ್ಳಾಪುರ: ಪ್ರತಿ ವರ್ಷದಂತೆ ಈ ವರ್ಷವೂ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಎಸ್ಸಿ/ಎಸ್ಟಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಇದೇ ತಿಂಗಳ 28ರಂದು ನಗರದ ಹರ್ಷೋದಯ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಸಂದೀಪ್ ಡಿ. ರೆಡ್ಡಿ ತಿಳಿಸಿದರು.ನಗರದ ಪತ್ರಕರ್ತರ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಕಾರ್ಯಕ್ರಮದಲ್ಲಿ ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಗೋಪಾಲ್ ಗೌಡ ಸೇರಿದಂತೆ ಹಲವು ಗಣ್ಯರು ಭಾಗವಹಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದರು. ಚಿಕ್ಕಬಳ್ಳಾಪುರದ ವಿಧಾನಸಭಾ ಕ್ಷೇತ್ರದ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿ,ಕಳೆದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕ ಪಡೆದ ಎಸ್ಸಿ/ಎಸ್ಟಿ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಹಾಗೂ ಪ್ರತಿಭಾ ಪುರಸ್ಕಾರ ನೀಡಲಾಗುವುದು.ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಿ ಅವರ ಆತ್ಮವಿಶ್ವಾಸ ಹೆಚ್ಚಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಅರ್ಹ ವಿದ್ಯಾರ್ಥಿಗಳು ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಕಚೇರಿಯಿಂದ ಅರ್ಜಿ ಪಡೆದು ಸಲ್ಲಿಸಬಹುದು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಾಮಾಜಿಕ ಜಾಲತಾಣಗಳ ಮೂಲಕವೂ ಅರ್ಜಿ ನಮೂನೆಗಳನ್ನು ತಲುಪಿಸಲಾಗುವುದು.ಅರ್ಹಯೊಂದಿಗೆ ವಿದ್ಯಾರ್ಥಿಯ ಆಧಾರ್ ಕಾರ್ಡ್,ಪೋಷಕರ ಆಧಾರ್ ಕಾರ್ಡ್,ಜಾತಿ ಪ್ರಮಾಣ ಪತ್ರ,ಅಂಕಪಟ್ಟಿಯ ಪ್ರತಿ ಹಾಗೂ ಶಿಕ್ಷಣ ಸಂಸ್ಥೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಸಲ್ಲಿಸಬೇಕು ಎಂದು ಹೇಳಿದರು.

ಪ್ರತಿ ವರ್ಷ ಸುಮಾರು 800 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು,ಈ ಬಾರಿ ಚಿಕ್ಕಬಳ್ಳಾಪುರದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಬಂದಿರುವ ಹಿನ್ನೆಲೆಯಲ್ಲಿ 1,600ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ತಲಾ ₹5,000 ನಗದು ಪ್ರೋತ್ಸಾಹದನ ಹಾಗೂ ಪ್ರಮಾಣಪತ್ರ ವಿತರಿಸಲಾಗುವುದು ಎಂದು ತಿಳಿಸಿದರು.ಈ ಬಾರಿಯ ಉತ್ತಮ ಶಿಕ್ಷಕಿಕ ಸಾಧಕ ಜಿಲ್ಲೆಯ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಮಹತ್ವದ ಮೈಲಿಗಲ್ಲಾಗಿದೆ.ಇದು ಶುಭ ಸೂಚಕವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿನ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ನಿಂದುವ ಕೊಸನ ಕಡ್ಡಾಯವಾಗಿ ತರಬೇಕು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ವಿದ್ಯಾರ್ಥಿಗಳು ರಾಜ್ಯದ ಯಾವುದೇ ಭಾಗದಲ್ಲಿ ಪರೀಕ್ಷೆ ಬರೆದಿದ್ದರೂ ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುತ್ತಾರೆ. ಆದರೆ ಬೇರೆ ವಿಧಾನಸಭಾ ಕ್ಷೇತ್ರದ ವಿದ್ಯಾರ್ಥಿಗಳು ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಪರೀಕ್ಷೆ ಬರೆದಿದ್ದರೂ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.ಈ ಸಂದರ್ಭದಲ್ಲಿ ಪತ್ರಿಕೋಷ್ಠಿಯಲ್ಲಿ ಗ್ರಾ.ಪಂ ಮಾಜಿ ವೆಂಕಟೇಶ್, ಮಾಂಚೇನಹಳ್ಳಿಯ ರಿಯಾಜ್, ಅಣಕನೂರು ಸುನೀಲ್, ಬಾಲಕೃಷ್ಣ ಬಾಲು, ಶಿವಕುಮಾರ್, ನಾಗೇಶ್, ಸಂದೀಪ್ ಸ್ಯಾಂಡಿ ಇತರರು ಹಾಜರಿದ್ದರು.

ಕೋಲಾರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆ; ವಿಶೇಷಾಧಿಕಾರಿ ನೇಮಕ

ಉದಯಕಾಲ ನ್ಯೂಸ್, ಕೋಲಾರ: ಕೋಲಾರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ರಾಜ್ಯ ಸರ್ಕಾರ ಉದೇಶಿಸಿದ್ದು, ರಾಷ್ಟ್ರೀಯ ವೈದ್ಯಕೀಯ ಆಯೋಗದೊಂದಿಗೆ ಸಮನ್ವಯ ಸಾಧಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವು ತಾತ್ಕಾಲಿಕ ವಿಶೇಷಾಧಿಕಾರಿ ನೇಮಕ ಮಾಡಿದೆ.

ಬೆಂಗಳೂರಿನ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಜಂಟಿ ನಿರ್ದೇಶಕ, ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ವಿಧಿ ವೈದ್ಯ ಮತ್ತು ವಿಷ ವೈದ್ಯ ವಿಜ್ಞಾನ ವಿಭಾಗದ ಮುಖ್ಯಸ್ಥ, ಪ್ರಾಧ್ಯಾಪಕ ಡಾ.ಎಸ್.ವೆಂಕಟಾ ರಾಘವ ಅವರನ್ನು ನೇಮಿಸಿದೆ.

ವೈದ್ಯಕೀಯ ಕಾಲೇಜು ಸ್ಥಾಪನೆ ಸಂಬಂಧ ಆಯೋಗದೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಪ್ರಕ್ರಿಯೆ ಪ್ರಾರಂಭಿಸಬೇಕು. ಕಾಲೇಜುಗಳಿಗೆ ಅಗತ್ಯವಿರುವ ಭೂಮಿ, ಕಟ್ಟಡ, ಬೋಧನಾ ಆಸ್ತಿ, ಮೂಲಸೌಕರ್ಯ, ವೈದ್ಯಕೀಯ ಉಪಕರಣಗಳು, ಮಾನವ ಸಂಪನ್ಮೂಲಗಳು ಹಾಗೂ ಇತರ ಶಾಸನಬದ್ಧ ಅವಶ್ಯಗಳಿಗೆ ಸಂಬಂಧಿಸಿದ ಸಮಗ್ರ ಪ್ರಸ್ತಾವನೆಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವ ಉದ್ದೇಶದಿಂದ ಈ ತಾತ್ಕಾಲಿಕ ವಿಶೇಷಾಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸಿದೆ.

ವಿಶೇಷಾಧಿಕಾರಿಯಾಗಿ ಕೂಡಲೇ ಕಾರ್ಯಾರ್ಹವ್ಯತ್ವರಾಗಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅವಶ್ಯವಿರುವ ಪ್ರಾಥಮಿಕ ಮಾಹಿತಿಯನ್ನು ಸಂಗ್ರಹಿಸಬೇಕು. ಜಿಲ್ಲಾಡಳಿತ ಹಾಗೂ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಬೇಕು. ಆಯೋಗದ ನಿಯಮಾವಳಿಗಳ ಅನುಸಾರ ಅಗತ್ಯ ಕ್ರಮ ವಹಿಸಬೇಕು. ಹಂತವಾರು ಕಾರ್ಯಯೋಜನೆಯನ್ನು ಸಿದ್ಧಪಡಿಸಬೇಕು ಹಾಗೂ ಪ್ರಗತಿ ವರದಿಯನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಹಾಗೂ ನಿರ್ದೇಶನಾಲಯಕ್ಕೆ ನೀಡಬೇಕು ಎಂದು ಸೂಚಿಸಲಾಗಿದೆ.

ಆಗತ್